ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ,ಬೆಂಗಳೂರು-12.

E-mail:commissioner.pue@gmail.com. * Ph. No.23361857, 23361858* Fax-23361852

ಸಂಖ್ಯೆ:ಪಿಯು/243/ಸಿಬ್ಬಂದಿ/ಸಿಆರ್-3/ಖಾಪೂಸೇ/2017-18 ದಿನಾಂಕ: - -201

## ಜ್ಞಾಪನ

**ವಿಷಯ:** 2013 ನೇ ಸಾಲಿನಲ್ಲಿ ನೇಮಕಗೊಂಡು ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಖಾಯಂ ಪೂರ್ವ ಸೇವಾ ಅವಧಿ ಘೋಷಣೆ ಕುರಿತು.

**ಉಲ್ಲೇಖ:** 1. ಪದವಿ ಪೂರ್ವ ಶಿಕ್ಷಣ ಇಲಾಖೆ ವಿಶೇಷ ನೇಮಕ ನೇಮಕಾತಿ ಅಧಿಸೂಚನೆ ಪಪೂಶಿ/ಸಿಬ್ಬಂದಿ-1 ವಿಶೇಷ ನೇಮಕ 01/2011-12 ದಿನಾಂಕ:13-04-2012

2. ವಿಶೇಷಾಧಿಕಾರಿಗಳು, ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು ಇವರ ಪತ್ರ ಸಿಎಸಿ 4/ಪಪೂಶಿ/ನೇ/01/2012-13 ದಿನಾಂಕ:13-02-2012
3. ಈ ಕಛೇರಿ ಅಧಿಸೂಚನೆ ಸಂಖ್ಯೆ: ಪಪೂಶಿ/ಸಿಬ್ಬಂದಿ-2/ವಿಶೇಷ ನೇಮಕ/01/ 2011-12 (ಭಾಗ-2) ದಿನಾಂಕ:27-06-2013
4. ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ, ಬಾಗಲಕೋಟೆ ಜಿಲ್ಲೆ ಇವರ ಪ್ರಸ್ತಾವನೆ ದಿನಾಂಕ:17-11-2017

**ಪ್ರಸ್ತಾವನೆ:**

2013 ನೇ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳಿಗೆ ವಿಶೇಷಾಧಿಕಾರಿಗಳ ಕಛೇರಿ, ಕೇಂದ್ರೀಕೃತ ದಾಖಲಾತಿ ಘಟಕದಿಂದ ಹಾಗೂ /ಜೆ.ಓ.ಸಿ. ವಿಲೀನ ಪ್ರಕ್ರಿಯೆಯಡಿಯಲ್ಲಿ ನೇಮಕಾತಿ ಹೊಂದಿ ಕಾರ್ಯನಿರ್ವಹಿಸುತ್ತಿರುವ ಈ ಕೆಳಕಂಡ ಉಪನ್ಯಾಸಕರು, ನಾಲ್ಕು ವರ್ಷಗಳ ಖಾಯಂ ಪೂರ್ವ ಸೇವಾ ಅವಧಿಯನ್ನು ಪೂರೈಸಿರುವುದರಿಂದ, ಪರಿವೀಕ್ಷಣಾ ಅವಧಿಯನ್ನು ತೃಪ್ತಿಕರವೆಂದು ಘೋಷಿಸುವಂತೆ ಕೋರಿ ಜಿಲ್ಲಾ ಉಪ ನಿರ್ದೇಶಕರ ಶಿಫಾರಸ್ಸಿನೊಂದಿಗೆ ಸಲ್ಲಿಸಲಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ:**

2013ನೇ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ನೇಮಕಾತಿ ಹೊಂದಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳ ಹೆಸರಿನ ಮುಂದೆ ವಿವರಿಸಿದಂತೆ ನಾಲ್ಕು ವರ್ಷಗಳ ಪರಿವೀಕ್ಷಣಾ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿರುವ ಹಿನ್ನಲೆಯಲ್ಲಿ, ಈ ಕೆಳಕಂಡ ಉಪನ್ಯಾಸಕರುಗಳ ಪರಿವೀಕ್ಷಣಾ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ (ಪರೀಕ್ಷಾರ್ಥ) ನಿಯಮ 1977 ನಿಯಮ 5 (1) (ಎ) ರ ಅನ್ವಯ ತೃಪ್ತಿಕರವೆಂದು ಘೋಷಿಸಲಾಗಿದೆ.

| ಕ್ರಮ ಸಂಖ್ಯೆ | ಉಪನ್ಯಾಸಕರ ಹೆಸರು ಮತ್ತು ವಿಳಾಸ ಶ್ರೀಮತಿ/ಶ್ರೀ | ಸೇವೆಗೆ ಸೇರಿದ ದಿನಾಂಕ | ಪರಿವೀಕ್ಷಣಾ ಅವಧಿಯನ್ನು ತೃಪ್ತಿಕರವೆಂದು ಪೂರೈಸಿದ ದಿನಾಂಕ | ಪರಿವೀಕ್ಷಣಾ ಅವಧಿಯನ್ನು ತೃಪ್ತಿಕರವೆಂದು ಘೋಷಿಸಿದ ದಿನಾಂಕ |
|---|---|---|---|---|
| 1 | 2 | 3 | 4 | 5 |
| 01 | ಸುಜಾತಾ ಪಾಟೀಲ<br>ಹಿಂದಿ ಉಪನ್ಯಾಸಕರು<br>ಸರ್ಕಾರಿ ಪದವಿ ಪೂರ್ವ ಕಾಲೇಜು, ತುಂಗಳ,<br>ಬಾಗಲಕೋಟೆ ಜಿಲ್ಲೆ | 01-07-2013 | 21-10-2017 | 22-10-2017 |

ಷರಾ;

1. ಖಾಯಂ ಪೂರ್ವ ಸೇವಾ ಅವಧಿ ಘೋಷಣೆ ಬಗ್ಗೆ ಸದರಿ ಉಪನ್ಯಾಸಕರುಗಳ ಸೇವಾಪುಸ್ತಕದಲ್ಲಿ ನಮೂದಿಸಿ ಪ್ರಾಚಾರ್ಯರು ಧೃಢೀಕರಿಸುವುದು.
2. ಒಟ್ಟು 112 ದಿನಗಳ ವೇತನ ರಹಿತ ರಜೆಯನ್ನು ಪಡೆದಿರುವುದರಿಂದ ಮುಂದೂಡಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

<u>ಪ್ರತಿಗಳು:</u>

1. ಮಹಾಲೇಖಪಾಲರು, ಕರ್ನಾಟಕ , ಬೆಂಗಳೂರು.
2. ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬಾಗಲಕೋಟೆ ಜಿಲ್ಲೆ
3. ಪ್ರಾಂಶುಪಾಲರು, ಸರ್ಕಾರಿ ಪದವಿ ಪೂರ್ವ ಕಾಲೇಜು, ------------------------------ ಬಾಗಲಕೋಟೆ ಜಿಲ್ಲೆ ಇವರಿಗೆ **ಮೂಲಸೇವಾಪುಸಕದೊಂದಿಗೆ** ಮುಂದಿನ ಕ್ರಮಕ್ಕಾಗಿ
4. ಸಂಬಂಧಿಸಿದ ಉಪನ್ಯಾಸಕರಿಗೆ - ಪ್ರಾಂಶುಪಾಲರ ಮೂಲಕ
5. ಸಹಾಯಕ ನಿರ್ದೇಶಕರು ಇ-ಆಡಳಿತ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು
6. ಕಛೇರಿ ಪ್ರತಿ.